ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacntsenmms@gmail.com

ಸಂಖ್ಯೆ: ಕೆ3/ NTSE-NMMS ಪರೀಕ್ಷೆ/10/2021–22 ದಿನಾಂಕ: 17.12.2021

# ಜ್ಞಾಪನ

ವಿಷಯ: NTS ಪರೀಕ್ಷೆಗೆ ಸಂಬಂಧಿಸಿದಂತೆ ಪರೀಕ್ಷಾ ಶುಲ್ಕವನ್ನು ಪಾವತಿಸಲು ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪತ್ರದ ಸಮಸಂಖ್ಯೆ ದಿನಾಂಕ: 10.12.2021 ಮತ್ತು 13.12.2021

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021–22ನೇ ಸಾಲಿನ NTS ಪರೀಕ್ಷೆಯನ್ನು ದಿನಾಂಕ:16.01.2022 ರಂದು ನಡೆಸಲಾಗುತ್ತದೆ. ಸದರಿ ಪರೀಕ್ಷೆಯ ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಿಸಿದಂತೆ ದಿನಾಂಕ:13.12.2021 ರಿಂದ ಶಾಲಾ ಲಾಗಿನ್‌ನಲ್ಲಿ ಚಲನ್ ಜನರೇಟ್ ಆಗುವ ಚಲನ್ ಅನ್ನು ಶಾಲೆಯ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಶಾಲಾ ಲಾಗಿನ್‌ನಲ್ಲಿ Download ಮಾಡಿ ಮುದ್ರಿಸಿಕೊಂಡು ರಾಜ್ಯದ ಯಾವುದೇ ಕೆನರಾ ಬ್ಯಾಂಕ್ ಶಾಖೆಯಲ್ಲಿ ದಿನಾಂಕ:18.12.2021 ರೊಳಗಾಗಿ ಶುಲ್ಕ ಪಾವತಿಸಿ, ಶುಲ್ಕ ಪಾವತಿಸಿದ ಮೂಲ ಚಲನ್ ಪ್ರತಿ ಮತ್ತು ನಾಮಿನಲ್ ರೋಲ್‌ನ(NR) ಪ್ರತಿಯನ್ನು ಈ ಕಛೇರಿಯ ವಿಳಾಸ **ಕಾರ್ಯನಿರ್ವಾಹಕ ನಿರ್ದೇಶಕರು, ಕೆ.ಎಸ್.ಕ್ಯು.ಎ.ಎ.ಸಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003** ಇಲ್ಲಿಗೆ **ನೋಂದಾಯಿತ ಅಂಚೆ** ಮೂಲಕ ತಲುಪಿಸಲು ಉಲ್ಲೇಖಿತ ಪತ್ರಗಳಲ್ಲಿ ತಿಳಿಸಲಾಗಿದೆ.

ಆದರೆ ದಿನಾಂಕ: 16.12.2021 ಮತ್ತು 17.12.2021 ರಂದು ಬ್ಯಾಂಕ್ ಅಧಿಕಾರಿಗಳು/ಸಿಬ್ಬಂದಿ ವರ್ಗದವರ ಮುಷ್ಕರದಿಂದಾಗಿ NTS ಪರೀಕ್ಷಾ ಶುಲ್ಕವನ್ನು ಪಾವತಿಸಲು ಉಂಟಾಗಿರುವ ಅಡಚಣೆಯನ್ನು ಪರಿಗಣಿಸಿ, NTS ಪರೀಕ್ಷಾ ಶುಲ್ಕವನ್ನು ಪಾವತಿಸಲು ದಿನಾಂಕ: 21.12.2021 ರವರೆಗೆ ಶಾಲಾ ಲಾಗಿನ್‌ನಲ್ಲಿ ಚಲನ್ ಅನ್ನು Download ಮಾಡಿ ಮುದ್ರಿಸಿಕೊಂಡು ರಾಜ್ಯದ ಯಾವುದೇ ಕೆನರಾ ಬ್ಯಾಂಕ್ ಶಾಖೆಯಲ್ಲಿ ಶುಲ್ಕ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ.

ಉಪನಿರ್ದೇಶಕರು (ಆಡಳಿತ), ಉಪನಿರ್ದೇಶಕರು (ಅಭಿವೃದ್ಧಿ), NTS ಪರೀಕ್ಷೆಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲೆಗಳ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಸದರಿ ಮಾಹಿತಿಯನ್ನು ನೀಡುವುದು ಮತ್ತು ಈ ಬಗ್ಗೆ ಸೂಕ್ತ ಕ್ರಮವಹಿಸಲು ತಿಳಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ.
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
3. NTS ಪರೀಕ್ಷೆಗೆ ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ.
4. ಎಲ್ಲಾ ಬ್ಲಾಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
5. ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
6. ಕಛೇರಿ ಪ್ರತಿ.